ಅಧ್ಯಕ್ಷರು: ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು.

ಶ್ರೀ ಎಂ.ಪಿ. ಪ್ರಕಾಶ್ (ಗೃಹ ಸಚಿವರು): ಮಾನ್ಯ ಅಧ್ಯಕ್ಷರೆ, ದಿನಾಂಕ 29ನೇ ಜನವರಿ 2007ರಂದು 1ನೇ ಪಟ್ಟಿಯ ಸದನದಲ್ಲಿ ಉತ್ತರಿಸುವ 15 ಪ್ರಶ್ನೆಗಳ ಪೈಕಿ 10 ಉತ್ತರಗಳನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ 41 ಪ್ರಶ್ನೆಗಳ ಪೈಕಿ 30 ಉತ್ತರಗಳನ್ನು ಹಾಗೂ ದಿನಾಂಕ: 31ನೇ ಜನವರಿ 2007ರಂದು 2ನೇ ಪಟ್ಟಿಯ ಸದನದಲ್ಲಿ ಉತ್ತರಿಸುವ 15 ಪ್ರಶ್ನೆಗಳ ಪೈಕಿ5 ಉತ್ತರಗಳನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ 30 ಪ್ರಶ್ನೆಗಳ ಪೈಕಿ 15 ಉತ್ತರಗಳನ್ನು ಹಾಗೂ ದಿನಾಂಕ: 0-2-02-2007ರಂದು 4ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 61 ಪ್ರಶ್ನೆಗಳ ಪೈಕಿ 51 ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಯಿತು. (ಅನುಬಂಧ-1)

3. ಸಭೆಯ ಮುಂದಿಡಲಾದ ಕಾಗದ ಪತ್ರಗಳ ಪಟ್ಟಿ (ಎರಡನೇ ಪಟ್ಟಿ)

ಶ್ರೀ ಎಂ.ಪಿ. ಪ್ರಕಾಶ್ (ಗೃಹ ಸಚಿವರು)

I ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿ) ಅವರ ಪರವಾಗಿ : ಮಾನ್ಯ ಅಧ್ಯಕ್ಷರೆ,

1984ರ ಕರ್ನಾಟಕ ಲೋಕಾಯುಕ್ತ ಅಧಿನಿಯಮ ಪರಿಚ್ಛೇದ 12(7)ರ ಅನ್ವಯ:

1. ಶ್ರೀ ಮಹ್ಮದ್ ಖಲೀಮುಲ್ಲಾ ಕೆ.ಎ.ಎಸ್., ಅಧಿಕಾರಿ ಅವರಿಗೆ ಸಂಬಂಧಿಸಿದಂತೆ ಸನ್ಮಾನ್ಯ ಉಪ ಲೋಕಾಯುಕ್ತರವರು ಸಲ್ಲಿಸಿದ ವಿಶೇಷ ವರದಿ ಹಾಗೂ ವಿವರಣಾತ್ಮಕ ಟಿಪ್ಪಣಿ

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ರಾಜ್ಯ ಪೋಲಿಸ್ ಗೃಹ ನಿರ್ಮಾಣ ನಿಗಮ ನಿಯಮಿತದ 2005-06ನೇ ಸಾಲಿನ ವಾರ್ಷಿಕ ಮತ್ತು ಲೆಕ್ಕಪರಿಶೋಧನಾ ವರದಿ.

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 48(5) ಮತ್ತು 49ನೇ ಪ್ರಕರಣದ ಮೇರೆಗೆ :

1. ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದ 2005-06ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.